# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಉದಯ ಪಟಾಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಪುಣಚ ಗ್ರಾಮ ಪಂಚಾಯತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

ಓದಲಾಗಿದೆ:

1. ಅಪರ ನಿಬಂಧಕರು, ವಿಚಾರಣೆಗಳು-7, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ ಪತ್ರ ಸಂಖ್ಯೆ: ಕಂಪ್ಲೇಂಟ್/ಉಪಲೋಕ್/ಎಂವೈಎಸ್-5087/2013/ಎಆರ್‌ಇ-7, ದಿ:08-05-2014.
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ: 26-06-2014 ರ ಕಾರಣ ಕೇಳುವ ನೋಟೀಸ್.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ರವರ ಪತ್ರ ಸಂಖ್ಯೆ:ದಕಜಿಪ/ಆಡಳಿತ/ಶಿಸ್ತು/ಸಿಆರ್ 19/2014-15(ಎ6), ದಿನಾಂಕ:22-08-2015.
4. ವಿಚಾರಣಾ ತಿಳುವಳಿಕೆ ಪತ್ರ ದಿನಾಂಕ: 01-01-2016, 23-01-2016 ಮತ್ತು 06-02-2016

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿನಾಂಕ:08-05-2014 ರ ಅಪರ ನಿಬಂಧಕರು, ವಿಚಾರಣೆಗಳು-7 ಕರ್ನಾಟಕ ಲೋಕಾಯುಕ್ತ ರವರ ಅರೆ ಸರ್ಕಾರಿ ಪತ್ರದಲ್ಲಿ ಶ್ರೀ ಅಬ್ದುಲ್ ಅಜೀಜ್ ಮತ್ತು ಶ್ರೀ ಎಂ. ಆರ್. ಮಂಜೀರ್, ದರ್ಬೆ ಪರ್ಲಡ್ಕ ರಸ್ತೆ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರು ಶ್ರೀಮತಿ ಪ್ರೇಮಲತಾ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಪುಣಚ ಗ್ರಾಮ ಪಂಚಾಯತಿ, ಬಂಟ್ವಾಳ ತಾಲ್ಲೂಕು ಮತ್ತು ಶ್ರೀ ಉದಯ ಪಟಾಲಿ, ಅಧ್ಯಕ್ಷರು, ಪುಣಚ ಗ್ರಾಮ ಪಂಚಾಯತಿ, ಬಂಟ್ವಾಳ ತಾಲ್ಲೂಕು ಇವರುಗಳ ವಿರುದ್ಧ ದೂರು ದಾಖಲಿಸಿ ತಮ್ಮ ವ್ಯಾಪಾರ ವಹಿವಾಟಿಗೆ ತೊಂದರೆಯಾಗುತ್ತಿದ್ದು, ಆಟೋ ರಿಕ್ಷಾ ಸ್ಟಾಂಡ್ ಮತ್ತು ನಾಮಫಲಕವನ್ನು ತೆರವುಗೊಳಿಸುವಂತೆ ತಮ್ಮ ಕೋರಿಕೆ ಹಾಗೂ ಗೌರವಾನ್ವಿತ ಉಚ್ಚ ನ್ಯಾಯಾಲಯದ ಆದೇಶವಿದ್ದರೂ ಗ್ರಾಮ ಪಂಚಾಯತಿಯು ಯಾವುದೇ ಕ್ರಮ ಕೈಗೊಳ್ಳದೆ ಕರ್ತವ್ಯಲೋಪವೆಸಗಿರುವುದರಿಂದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಗಳು, 1957 ರ ನಿಯಮ 14ಎ ರನ್ವಯ ಇಲಾಖಾ ವಿಚಾರಣೆ ನಡೆಸಲು ಮತ್ತು ಗ್ರಾಮ ಪಂಚಾಯತಿ ಅಧ್ಯಕ್ಷರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದಡಿ ಕ್ರಮ ಕೈಗೊಳ್ಳಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀ ಉದಯ ಪಟಾಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಪುಣಚ ಗ್ರಾಮ ಪಂಚಾಯತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರಿಗೆ ದಿನಾಂಕ:26-06-2014 ರಂದು ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಇದುವರೆವಿಗೂ ಲಿಖಿತ ಹೇಳಿಕೆ ನೀಡಿರುವುದಿಲ್ಲ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಶ್ರೀ ಉದಯ ಪಟಾಲಿ ರವರು ಇತ್ತೀಚಿಗೆ ನಡೆದ ಚುನಾವಣೆಯಲ್ಲಿ ಪುಣಚ ಗ್ರಾಮದ 1 ನೇ ವಾರ್ಡಿನಿಂದ ಆಯ್ಕೆಯಾಗಿ ಗ್ರಾಮ ಪಂಚಾಯತ್ ಸದಸ್ಯರಾಗಿ ಪುಣಚ ಗ್ರಾಮ ಪಂಚಾಯತಿಯಲ್ಲಿರುವುದರಿಂದ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ) ರಡಿ ಕ್ರಮ ಕೈಗೊಳ್ಳಬಹುದಾಗಿದೆ. ಆದುದರಿಂದ ಸದರಿಯವರ ಸದಸ್ಯತ್ವವನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರಂತೆ ರದ್ದುಪಡಿಸುವ ಬಗ್ಗೆ ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ರವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಶ್ರೀ ಉದಯ ಪಟಾಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಮಣಚ ಗ್ರಾಮ ಪಂಚಾಯತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರು ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ನೀಡಲಾಗಿದ್ದು, ಸದರಿಯವರು ದಿನಾಂಕ: 13-01-2016, 01-02-2016 ಮತ್ತು 29-02-2016 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ನ್ಯಾಯಾಲಯದಲ್ಲಿ ನಡೆದ ಮೌಖಿಕ ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ನ್ಯಾಯಾಲಯದಲ್ಲಿ ಪರಿಶೀಲಿಸಲಾಗಿದ್ದು, ಈಗಾಗಲೇ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಗಳು, 1957 ರ ನಿಯಮ 14ಎ ರನ್ವಯ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ದಿನಾಂಕ:26-06-2014 ರಂದು ವಹಿಸಲಾಗಿದೆ. ಶ್ರೀ ಉದಯ ಪಟಾಲಿ, ಹಿಂದಿನ ಅಧ್ಯಕ್ಷರು, ಮಣಚ ಗ್ರಾಮ ಪಂಚಾಯತಿ, ಬಂಟ್ವಾಳ ತಾಲ್ಲೂಕು ಇವರು ಆಟೋ ರಿಕ್ಷಾ ಸ್ಟಾಂಡ್ ಮತ್ತು ನಾಮಫಲಕವನ್ನು ತೆರವುಗೊಳಿಸುವಂತೆ ಗೌರವಾನ್ವಿತ ಉಚ್ಚ ನ್ಯಾಯಾಲಯದ ಆದೇಶವಿದ್ದರೂ ಗ್ರಾಮ ಪಂಚಾಯತಿಯು ಯಾವುದೇ ಕ್ರಮ ಕೈಗೊಳ್ಳದೆ ಕರ್ತವ್ಯಲೋಪವೆಸಗಿರುವುದರಿಂದ ಗ್ರಾಮ ಪಂಚಾಯತಿ ಅಧ್ಯಕ್ಷರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದಡಿ ಕ್ರಮ ಕೈಗೊಳ್ಳಲು ಮಾನ್ಯ ಉಪಲೋಕಾಯುಕ್ತರು ಕೋರಿದ್ದು, ಶ್ರೀ ಉದಯ ಪಟಾಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಮಣಚ ಗ್ರಾಮ ಪಂಚಾಯತಿ, ಬಂಟ್ವಾಳ ತಾಲ್ಲೂಕು ರವರು ಕರ್ತವ್ಯಲೋಪವೆಸಗಿರುವುದು ಕಂಡು ಬಂದಿರುವುದರಿಂದ ಸದರಿಯವರನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಂತೆ ಮಣಚ ಗ್ರಾಮ ಪಂಚಾಯತಿ ಸದಸ್ಯತ್ವದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/245/ಗ್ರಾಪಂಕಾ/2014**
**ಬೆಂಗಳೂರು, ದಿನಾಂಕ: 12-04-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಉದಯ ಪಟಾಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಮಣಚ ಗ್ರಾಮ ಪಂಚಾಯತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಮಣಚ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ: ಎನ್. ನಾಗಾಂಬಿಕಾದೇವಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಗಳು:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ಜಿಲ್ಲೆ,
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
3) ಶ್ರೀ ಉದಯ ಪಟಾಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಮಣಚ ಗ್ರಾಮ ಪಂಚಾಯತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮಣಚ ಗ್ರಾಮ ಪಂಚಾಯತಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.